# ಕರ್ನಾಟಕ ವಿಧಾನ ಪರಿಷತ್ತು

## ನೂರ ಐವತ್ತೆರಡನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಬುಧವಾರ, ದಿನಾಂಕ:14ನೇ ಫೆಬ್ರವರಿ, 2024**
**(ಸಮಯ: ಬೆಳಗ್ಗೆ 10.00 ಗಂಟೆಗೆ)**

* * *

### 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಎರಡನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಎರಡನೆಯ ಪಟ್ಟಿ

### 02. ಸಭೆಯ ಮುಂದಿಡಲಾಗುವ ಕಾಗದ ಪತ್ರ

**ಶ್ರೀ ಸಿದ್ದರಾಮಯ್ಯ (ಮಾನ್ಯ ಮುಖ್ಯಮಂತ್ರಿಗಳು)** ಅವರು:- ಭಾರತದ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ, ಭಾರತದ ಲೆಕ್ಕ ನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರು ನೀಡಿರುವ 2022-23ನೇ ಸಾಲಿನ ಧನವಿನಿಯೋಗ ಲೆಕ್ಕಗಳು ಮತ್ತು ಹಣಕಾಸು ಲೆಕ್ಕಗಳನ್ನು (ಸಂಪುಟ-I ಮತ್ತು II) ಸಭೆಯ ಮುಂದಿಡುವುದು.

### 03. ವರದಿಯನ್ನೊಪ್ಪಿಸುವುದು

**ಶ್ರೀ ಶಿವಾನಂದ ಎಸ್. ಪಾಟೀಲ್ (ಅಧ್ಯಕ್ಷರು ಮತ್ತು ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು)** ಅವರು ಕರ್ನಾಟಕ ವಿಧಾನ ಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ **ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ಧಿ) (ತಿದ್ದುಪಡಿ) ವಿಧೇಯಕ, 2023**ನ್ನು ಪರಿಶೀಲಿಸಿ ಸದನಕ್ಕೆ ವರದಿಯನ್ನು ಸಲ್ಲಿಸಲು ರಚಿಸಲಾಗಿರುವ ಪರಿಶೀಲನಾ ಸಮಿತಿಯ ವರದಿಯನ್ನೊಪ್ಪಿಸುವುದು.

..2..

## 04. ಶೂನ್ಯವೇಳೆ ಪ್ರಸ್ತಾವಗಳು

## 05. ಗಮನ ಸೆಳೆಯುವ ಸೂಚನೆಗಳು

01. **ಡಾ: ತಳವಾರ್ ಸಾಬಣ್ಣ** ಅವರು ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳ ಅಧ್ಯಯನ ಪೀಠಗಳಲ್ಲಿ ಪ್ರಸ್ತುತವಿರುವ ಶೈಕ್ಷಣಿಕ ಸ್ಥಿತಿ, ಕಾರ್ಯವೈಖರಿ, ಹಣಕಾಸಿನ ವ್ಯವಸ್ಥೆ, ಸಾಮಾಜಿಕ ಮತ್ತು ಶೈಕ್ಷಣಿಕ ಕ್ಷೇತ್ರಕ್ಕೆ ನೀಡಿದ ಕೊಡುಗೆ ಹಾಗೂ ಎದುರಿಸುತ್ತಿರುವ ಸಮಸ್ಯೆಗಳ ಕುರಿತು ಮಾನ್ಯ ಉನ್ನತ ಶಿಕ್ಷಣ ಸಚಿವರ ಗಮನ ಸೆಳೆಯುವುದು.

02. **ಶ್ರೀ ಪ್ರತಾಪ್ ಸಿಂಹ ನಾಯಕ್. ಕೆ** ಅವರು ಮುಜರಾಯಿ ಇಲಾಖೆಯ ವ್ಯಾಪ್ತಿಯಲ್ಲಿ ನೋಂದಾಯಿತ "ಎ" ಮತ್ತು "ಬಿ" ದರ್ಜೆ ದೇವಾಲಯಗಳಲ್ಲಿ ಭಕ್ತರಿಗೆ ಕನಿಷ್ಠ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸದಿರುವುದು ಹಾಗೂ ದೇವಾಲಯಗಳ ಭದ್ರತೆ ಮತ್ತು ಸುರಕ್ಷತೆಗೆ ಸರ್ಕಾರ ಸೂಕ್ತ ಕ್ರಮ ವಹಿಸದಿರುವ ಕುರಿತು ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರ ಗಮನ ಸೆಳೆಯುವುದು.

03. **ಶ್ರೀ ಎಂ.ಎಲ್. ಅನಿಲ್ ಕುಮಾರ್** ಅವರು ಬಯಲು ಸೀಮೆ ಪ್ರದೇಶಾಭಿವೃದ್ಧಿ ಮಂಡಳಿಯ ವ್ಯಾಪ್ತಿಯಲ್ಲಿ ಸಾರ್ವಜನಿಕ ಮಹತ್ವದ ಕಾಮಗಾರಿಗಳಿಗೆ ಅನುದಾನ ಬಿಡುಗಡೆ ಆಗದಿರುವುದರಿಂದ ಕಾಮಗಾರಿ ಕೈಗೊಳ್ಳುವಲ್ಲಿ ಹಿನ್ನಡೆಯಾಗಿರುವ ಕುರಿತು ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಸಚಿವರ ಗಮನ ಸೆಳೆಯುವುದು.

04. **ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ** ಅವರು ಧಾರವಾಡ, ಬೆಳಗಾವಿ, ಉತ್ತರ ಕನ್ನಡ, ಶಿವಮೊಗ್ಗ ಮತ್ತು ಭದ್ರಾವತಿ ಜಿಲ್ಲೆಗಳಲ್ಲಿ ಕಾಡು ಮತ್ತು ಕಾಡಂಚಿನಲ್ಲಿ ವಾಸ ಮಾಡುತ್ತಿರುವ ದನಗರ ಗೌಳಿ ಜನಾಂಗದ ಹೈನುಗಾರಿಕೆ ವೃತ್ತಿಯನ್ನು ಪ್ರೋತ್ಸಾಹಿಸಿ ಬೇಸಿಗೆ ಸಮಯದಲ್ಲಿ ಮೇವು ಸಿಗುವಂತೆ ಯೋಜನೆ ರೂಪಿಸಿ ಅನುಕೂಲ ಮಾಡಿಕೊಡುವ ಕುರಿತು ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರ ಗಮನ ಸೆಳೆಯುವುದು.

05. **ಶ್ರೀ ಸುನೀಲ್ ವಲ್ಯಾಪುರ್** ಅವರು ಕಲಬುರಗಿ ಜಿಲ್ಲೆ ವ್ಯಾಪ್ತಿಯಲ್ಲಿರುವ ರಾಷ್ಟ್ರೀಯ/ರಾಜ್ಯ/ಜಿಲ್ಲಾ ಹೆದ್ದಾರಿಗಳ ಕಳಪೆ ಗುಣಮಟ್ಟದ ಕಾಮಗಾರಿಗಳಿಂದ ಹಾಗೂ ಅವೈಜ್ಞಾನಿಕ ರಸ್ತೆ ತಿರುವುಗಳಿಂದ ಅಪಘಾತಗಳು ಹೆಚ್ಚುತ್ತಿರುವ ಕುರಿತು ಮಾನ್ಯ ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು.

## 06. ನಿಯಮ 330ರ ಮೇರೆಗೆ

೦೧. **ಶ್ರೀ ಕೆ.ಪಿ. ನಂಜುಂಡಿ ವಿಶ್ವಕರ್ಮ** ಅವರು ವಿಶ್ವಕರ್ಮ ಸಮಾಜದ 4 ಕುಲದೇವರುಗಳಾದ ಬೆಳಗಾವಿ ಜಿಲ್ಲೆಯ ಸಿರಸಂಗಿ ಕಾಳಿಕಾದೇವಿ ದೇವಸ್ಥಾನ, ಯಾದಗಿರಿ ಜಿಲ್ಲೆಯ ತಿಂತಣಿ ಮೌನೇಶ್ವರ ದೇವಸ್ಥಾನ, ಚಾಮರಾಜನಗರ ಜಿಲ್ಲೆಯ ಚಿಕ್ಕಲ್ಲೂರಿನ ಸಿದ್ದಪ್ಪಾಜಿ ದೇವಾಲಯ ಹಾಗೂ ಚಿಕ್ಕಬಳ್ಳಾಪುರದ ಕಾಲಜ್ಞಾನಿ ವೀರಬ್ರಮ್ಮೇಂದ್ರ ಸ್ವಾಮಿಯವರ ದೇವಾಲಯ-ಪಾಪಾಗ್ನಿ ಮಠ ಈ ನಾಲ್ಕು ಐತಿಹಾಸಿಕ ಧಾರ್ಮಿಕ ಕ್ಷೇತ್ರಗಳನ್ನು ಒಟ್ಟುಗೂಡಿಸಿ ಪ್ರಾಧಿಕಾರವನ್ನಾಗಿ ಮಾಡುವ ಕುರಿತು ಪ್ರಸ್ತಾಪಿಸುವುದು.

೦೨. **ಶ್ರೀ ಮಂಜುನಾಥ್ ಭಂಡಾರಿ** ಅವರು ಸಂವಿಧಾನದ ಆಶಯದಂತೆ ಗ್ರಾಮ ಪಂಚಾಯತಿಗಳು, ತಾಲ್ಲೂಕು ಪಂಚಾಯತಿಗಳು ಹಾಗೂ ಜಿಲ್ಲಾ ಪಂಚಾಯತಿಗಳು ಸ್ಥಳೀಯ ಸರ್ಕಾರಗಳಾಗಿ ಕೆಲಸ ಮಾಡುವ ದೃಷ್ಟಿಯಿಂದ ಈಗಾಗಲೇ ರೂಪಿಸಿರುವ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾನೂನಿನಲ್ಲಿರುವ ಎಲ್ಲಾ ಅಧಿಕಾರಗಳನ್ನು ಹಾಗೂ ಹಣಕಾಸನ್ನು ಸ್ಥಳೀಯ ಸಂಸ್ಥೆಗಳಿಗೆ ಹಸ್ತಾಂತರಿಸುವ ಕುರಿತು ಪ್ರಸ್ತಾಪಿಸುವುದು.

೦೩. **ಶ್ರೀಯುತರುಗಳಾದ ಛಲವಾದಿ ಟಿ. ನಾರಾಯಣಸ್ವಾಮಿ ಹಾಗೂ ನಿರಾಣಿ ಹಣಮಂತ ರುದ್ರಪ್ಪ** ಅವರುಗಳು ಹಿಂದುಳಿದ ವರ್ಗಗಳ ವಸತಿ ಶಾಲೆ ಮತ್ತು ಹಾಸ್ಟೆಲ್‌ಗಳಲ್ಲಿ ಮೂಲಭೂತ ಸೌಕರ್ಯಗಳ ಕೊರತೆಯಿಂದಾಗಿ ಕಲಿಕೆ ಮಾಡುತ್ತಿರುವ ಸಾವಿರಾರು ವಿದ್ಯಾರ್ಥಿಗಳು ಸಂಕಷ್ಟದಲ್ಲಿರುವ ಕುರಿತು ಪ್ರಸ್ತಾಪಿಸುವುದು.

## 07. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವದ ಮೇಲಿನ ಚರ್ಚೆ

"2024ನೇ ಫೆಬ್ರವರಿ, 12ರಂದು ಘನತೆವೆತ್ತ ರಾಜ್ಯಪಾಲರು ವಿಧಾನ ಮಂಡಲದ ಶಾಸಕರುಗಳನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನ ಪರಿಷತ್ತಿನ ಶಾಸಕರಾದ ನಾವು ರಾಜ್ಯಪಾಲರಿಗೆ ಕೃತಜ್ಞತಾಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ" ಎಂದು ದಿನಾಂಕ:13.02.2024ರಂದು **ಶ್ರೀ ಯು.ಬಿ. ವೆಂಕಟೇಶ್** ರವರು ಸೂಚಿಸಿದ ಪ್ರಸ್ತಾವದ ಮೇಲೆ ಚರ್ಚೆ

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.

**www.kla.kar.nic.in/council/council.htm**